**All India Radio: Bangalore**
**National Bulletin In Kannada**
**16.05.2026 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**16.05.2026 1.10 p.m.**
**<><><><>**

ಮುಖ್ಯಾಂಶಗಳು

1. ನೆದರ್‌ಲ್ಯಾಂಡ್ಸ್‌ನಲ್ಲಿಂದು ಮಧ್ಯಾಹ್ನ ಭಾರತೀಯ ಸಮುದಾಯ ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಭಾಷಣ
2. ಡೆಂಗ್ಯೂ ನಿಯಂತ್ರಣಕ್ಕೆ ಸ್ವಚ್ಛ, ಸುರಕ್ಷಿತ ಪರಿಸರ ನಿರ್ಮಿಸಲು ಜನ ಸಮುದಾಯ ಪಣತೊಡಬೇಕು - ಸಚಿವ ಜೆ.ಪಿ. ನಡ್ಡಾ
3. ಜಾಗತಿಕ ಕಚ್ಚಾ ತೈಲ ಪರಿಸ್ಥಿತಿ ಹಿನ್ನೆಲೆ; ಪೆಟ್ರೋಲ್, ಡೀಸೆಲ್ ದರ ಏರಿಕೆ ಅನಿವಾರ್ಯ - ಸಚಿವ ಪ್ರಲ್ಹಾದ್ ಜೋಶಿ
4. ತೈಲ ಸಾಗಾಣಿಕೆಯ ಹಾರ್ಮುಜ್ ಜಲಮಾರ್ಗ ಶೀಘ್ರ ಸಂಚಾರಕ್ಕೆ ಮುಕ್ತ - ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್
5. ಐಪಿಎಲ್ ಕ್ರಿಕೆಟ್; ಈಡನ್ ಗಾರ್ಡನ್ಸ್‌ನಲ್ಲಿಂದು ಕೋಲ್ಕತ್ತಾ ನೈಟ್ ರೈಡರ್ಸ್-ಗುಜರಾತ್ ಟೈಟನ್ಸ್ ಮುಖಾಮುಖಿ

<><><><>

ಐರೋಪ್ಯ ರಾಷ್ಟ್ರಗಳೊಂದಿಗೆ ಭಾರತದ ಕಾರ್ಯತಂತ್ರ ಮತ್ತು ಆರ್ಥಿಕ ಸಂಬಂಧಗಳನ್ನು ಗಾಢವಾಗಿಸುವ ಗುರಿ ಹೊಂದಿರುವ ಐದು ರಾಷ್ಟ್ರಗಳ ಪ್ರವಾಸದ ಎರಡನೇ ಹಂತದಲ್ಲಿ ಪ್ರಧಾನಿ ನರೇಂದ್ರ ಮೋದಿ, ಇಂದು ನೆದರ್‌ಲ್ಯಾಂಡ್ಸ್‌ನಲ್ಲಿ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಸಹಸ್ರಾರು ಮಂದಿ ಭಾರತೀಯ ಸಮುದಾಯಗಳು ಪ್ರಧಾನಿ ಸಂವಾದದಲ್ಲಿ ಪಾಲ್ಗೊಳ್ಳುತ್ತಿದ್ದು, ಇದಕ್ಕಾಗಿ ಎಲ್ಲಾ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ನಂತರ ಅವರು, ಭಾರತ ಮತ್ತು ಪ್ರಮುಖ ಡಚ್ ಕಂಪನಿಗಳ ಸಿಇಒಗಳನ್ನು ಭೇಟಿ ಮಾಡಲಿದ್ದಾರೆ. ವಿಶೇಷವಾಗಿ ಸೆಮಿಕಂಡಕ್ಟರ್ ಚಿಪ್ಸ್ ಮತ್ತು ಕೃತಕ ಬುದ್ಧಿಮತ್ತೆ ಕ್ಷೇತ್ರಗಳಲ್ಲಿ ಹಲವಾರು ಪ್ರಮುಖ ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆಯಿದೆ. ವ್ಯಾಪಾರ ದೃಷ್ಟಿಕೋನದಿಂದ, ನೆದರ್ಲ್ಯಾಂಡ್ಸ್ ಭಾರತದ ಪ್ರಮುಖ

ಆರ್ಥಿಕ ಪಾಲುದಾರ ದೇಶವಾಗಿದೆ. ಎರಡೂ ದೇಶಗಳು ನೀರು ನಿರ್ವಹಣೆ, ನವೀಕರಿಸಬಹುದಾದ ಇಂಧನ, ಹಸಿರು ಜಲಜನಕ ಆರ್ಥಿಕತೆ, ಕೃಷಿ ತಂತ್ರಜ್ಞಾನ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಬಲವಾದ ಪಾಲುದಾರಿಕೆ ಮತ್ತು ಸಹಕಾರವನ್ನು ಹೊಂದಿವೆ. ನೆದರ್ಲ್ಯಾಂಡ್ಸ್‌ಗೆ ಭೇಟಿ ನೀಡಿ ನಂತರ ಪ್ರಧಾನಿ, ತಮ್ಮ ಐದು ರಾಷ್ಟ್ರಗಳ ಪ್ರವಾಸದ ಮೂರನೇ ಹಂತದಲ್ಲಿ ನಾಳೆ ಸ್ವೀಡನ್‌ನ ಗೋಥೆನ್‌ಬರ್ಗ್‌ಗೆ ಪ್ರಯಾಣಿಸಲಿದ್ದಾರೆ. ನರೇಂದ್ರ ಮೋದಿ ಅವರು ಸ್ವಿಡನ್ ಪ್ರಧಾನಿ ಉಲ್ಫ್ ಕ್ರಿಸ್ಟರ್ಸನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆಗಳನ್ನು ನಡೆಸಲಿದ್ದಾರೆ. ಯುರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರೊಂದಿಗೆ ಪ್ರಮುಖ ಪ್ಯಾನ್-ಯುರೋಪಿಯನ್ ವ್ಯಾಪಾರ ನಾಯಕರ ವೇದಿಕೆಯಾದ ಯುರೋಪಿಯನ್ ರೌಂಡ್ ಟೇಬಲ್ ಫಾರ್ ಇಂಡಸ್ಟ್ರಿ ಸದಸ್ಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ತಮ್ಮ ಭೇಟಿಯ ನಾಲ್ಕನೇ ಹಂತದಲ್ಲಿ, ಪ್ರಧಾನಿ ಮೋದಿ ಸೋಮವಾರ ನಾರ್ವೆಗೆ ತಲುಪಲಿದ್ದು, ಮೂರನೇ ಭಾರತ-ನಾರ್ಡಿಕ್ ಶೃಂಗಸಭೆ ಮತ್ತು ದ್ವಿಪಕ್ಷೀಯ ಮಾತುಕತೆಗಳನ್ನು ನಡೆಸಲಿದ್ದಾರೆ. ಅವರು ದೊರೆ ಹರಾಲ್ಡ್ ಮತ್ತು ರಾಣಿ ಸೋಂಜಾ ಅವರನ್ನು ಭೇಟಿ ಮಾಡಲಿದ್ದಾರೆ. ಪ್ರಧಾನಿ ಜೋನಾಸ್ ಗಹರ್ ಸ್ಟೋರೆ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ನಾರ್ವೇಜಿಯನ್ ಪ್ರಧಾನಿಯೊಂದಿಗೆ ಭಾರತ-ನಾರ್ವೆ ವ್ಯವಹಾರ ಮತ್ತು ಸಂಶೋಧನಾ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಮಂಗಳವಾರ ನಡೆಯಲಿರುವ ಮೂರನೇ ಭಾರತ-ನಾರ್ಡಿಕ್ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಭಾಗವಹಿಸಲಿದ್ದಾರೆ. ಪ್ರಧಾನಿ ಮೋದಿ ಅವರೊಂದಿಗೆ ನಾರ್ವೆ ಪ್ರಧಾನಿ ಜೋನಾಸ್ ಗಹರ್ ಸ್ಟೋರೆ, ಡೆನ್ಮಾರ್ಕ್ ಪ್ರಧಾನಿ ಮೆಟ್ಟೆ ಫ್ರೆಡೆರಿಕ್ಸೆನ್, ಫಿನ್ಲ್ಯಾಂಡ್ ಪ್ರಧಾನಿ ಪೆಟ್ಟೆರಿ ಓರ್ಪೊ, ಐಸ್ಲ್ಯಾಂಡ್ ಪ್ರಧಾನಿ ಕ್ರಿಸ್ಟ್ರುನ್ ಫ್ರಾಸ್ಟಾಡೋಟ್ಟಿರ್ ಮತ್ತು ಸ್ವೀಡನ್ ಪ್ರಧಾನಿ ಉಲ್ಫ್ ಕ್ರಿಸ್ಟರ್ಸನ್ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಶೃಂಗಸಭೆಯು ನಾರ್ಡಿಕ್ ದೇಶಗಳೊಂದಿಗೆ ಭಾರತದ ಸಂಬಂಧದಲ್ಲಿ ವಿಶೇಷವಾಗಿ ತಂತ್ರಜ್ಞಾನ ಮತ್ತು ನಾವೀನ್ಯತೆ; ಹಸಿರು ಪರಿವರ್ತನೆ ಮತ್ತು ನವೀಕರಿಸಬಹುದಾದ ಇಂಧನ; ಸುಸ್ಥಿರತೆ; ನೀಲಿ ಆರ್ಥಿಕತೆ; ರಕ್ಷಣೆ; ಬಾಹ್ಯಾಕಾಶ ವಲಯದಲ್ಲಿ ವಿಭಿನ್ನ  ಕಾರ್ಯತಂತ್ರದ ಆಯಾಮವನ್ನು ನೀಡುತ್ತದೆ. ತಮ್ಮ ಭೇಟಿಯ ಕೊನೆಯ ಹಂತದಲ್ಲಿ, ಪ್ರಧಾನಿ ಮಂಗಳವಾರ ಇಟಲಿ ತಲುಪಲಿದ್ದಾರೆ. ಅವರು ಇಟಲಿ ಅಧ್ಯಕ್ಷ

ಸೆರ್ಗಿಯೊ ಮಟ್ಟರೆಲ್ಲಾ ಅವರನ್ನು ಭೇಟಿ ಮಾಡಲಿದ್ದಾರೆ ಮತ್ತು ಪ್ರಧಾನಿ ಜಾರ್ಜಿಯಾ ಮೆಲೋನಿ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ.

<><><>

ದೇಶದಲ್ಲಿ ಇಂದು ರಾಷ್ಟ್ರೀಯ ಡೆಂಗ್ಯೂ ದಿನವನ್ನು ಆಚರಿಸಲಾಗುತ್ತಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯವು ಅಧಿಕೃತವಾಗಿ ಘೋಷಿಸಿರುವ ಈ ದಿನವು, ರೋಗದ ವಿರುದ್ಧ ಜಾಗೃತಿ ಮೂಡಿಸುವುದು ಮತ್ತು ಮುಂಗಾರು ಪೂರ್ವ ಕ್ರಮಗಳನ್ನು ಬಲಪಡಿಸುವ ಗುರಿಯನ್ನು ಹೊಂದಿದೆ. ಸೊಳ್ಳೆಗಳ ಸಂತಾನೋತ್ಪತ್ತಿಯನ್ನು ತಡೆಗಟ್ಟುವ ಗುರಿ ಹೊಂದಿರುವ, ನಿಂತ ನೀರನ್ನು ತೆರವುಗೊಳಿಸುವ ಮತ್ತು ನೀರು ಸಂಗ್ರಹಣಾ ಟ್ಯಾಂಕ್‌ಗಳ ಸರಿಯಾದ ನಿರ್ವಹಣೆ ಸೇರಿದಂತೆ ಸರಳ ನಿಯಂತ್ರಣ ತಂತ್ರಗಳನ್ನು ಉತ್ತೇಜಿಸಲು ಈ ದಿನವನ್ನು ಗುರುತಿಸಲಾಗಿದೆ. ರಾಷ್ಟ್ರೀಯ ಡೆಂಗ್ಯೂ ದಿನದ ಸಂದರ್ಭದಲ್ಲಿ, ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ ಅವರು ಡೆಂಗ್ಯೂ ತಡೆಗಟ್ಟುವಿಕೆಯ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಸ್ವಚ್ಛ ಮತ್ತು ಸುರಕ್ಷಿತ ಪರಿಸರವನ್ನು ಕಾಪಾಡಿಕೊಳ್ಳಲು ನಾಗರಿಕರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದ್ದಾರೆ. ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ, ಸರ್ಕಾರ ಕಣ್ಗಾವಲು ವ್ಯವಸ್ಥೆಯನ್ನು ತೀವ್ರಗೊಳಿಸಿದೆ. ವಿಸ್ತೃತ ಪರೀಕ್ಷೆ, ಸುಧಾರಿತ ಚಿಕಿತ್ಸಾ ಸೌಲಭ್ಯಗಳು ಮತ್ತು ವ್ಯಾಪಕ ಜಾಗೃತಿ ಅಭಿಯಾನಗಳ ಮೂಲಕ ಡೆಂಗ್ಯೂ ನಿಯಂತ್ರಣ ಪ್ರಯತ್ನಗಳನ್ನು ಬಲಪಡಿಸುವುದನ್ನು ಮುಂದುವರೆಸಿದೆ. "ಡೆಂಗ್ಯೂ ನಿಯಂತ್ರಣಕ್ಕಾಗಿ ಸಮುದಾಯದ ಭಾಗವಹಿಸುವಿಕೆಯನ್ನು ಪರಿಶೀಲಿಸಿ, ಸ್ವಚ್ಛಗೊಳಿಸಿ" ಎಂಬುದು ಈ ಬಾರಿಯ ಧ್ಯೇಯವಾಕ್ಯವಾಗಿದೆ ಎಂದು ನಡ್ಡಾ ಒತ್ತಿ ಹೇಳಿದ್ದಾರೆ.

<><><>

ಜಾಗತಿಕ ಸಂಘರ್ಷದ ಬಿಕ್ಕಟ್ಟಿನ ನಡುವೆಯೂ ಭಾರತ ತೈಲ ಬೆಲೆಯನ್ನು ಅತ್ಯಂತ ಕನಿಷ್ಠ ಮಟ್ಟದಲ್ಲಿ ಹೆಚ್ಚಳ ಮಾಡಿದೆ. ಇತರೆ ರಾಷ್ಟ್ರಗಳಲ್ಲಿ ಶೇಕಡ ೧೦ ರಿಂದ ೪೫ರಷ್ಟು ಏರಿಕೆ ಕಂಡಿದ್ದರೆ, ಭಾರತದಲ್ಲಿ ಕೇವಲ ಶೇಕಡ ೩.೨ರಷ್ಟು ಮಾತ್ರವೇ ಹೆಚ್ಚಳವಾಗಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಪಶ್ಚಿಮ ಏಷ್ಯಾ ಸಂಘರ್ಷ ಮತ್ತು ಇಂಧನ ಪೂರೈಕೆಗಳ ಅಡ್ಡಿ - ಆತಂಕದ ನಡುವೆಯೂ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ದೇಶದ ನಾಗರಿಕರ ಹಿತದೃಷ್ಟಿಯಿಂದ ಕೆಲವೇ ದಿನಗಳ ಹಿಂದೆ ಅಬಕಾರಿ ಸುಂಕವನ್ನು ೧೦

ರೂಪಾಯಿಯಷ್ಟು ಕಡಿಮೆ ಮಾಡಿತ್ತು. ಆದರೆ ಇದೀಗ ಬ್ರೆಂಟ್ ಕಚ್ಚಾ ತೈಲ ಬೆಲೆ ಐತಿಹಾಸಿಕ ಗರಿಷ್ಠ ಮಟ್ಟಕ್ಕೆ ಏರುತ್ತಿದ್ದರಿಂದ ಪೆಟ್ರೋಲ್, ಡಿಸೇಲ್ ದರ ಹೆಚ್ಚಳ ಅನಿವಾರ್ಯವಾಗಿದೆ ಎಂದರು. ಆದರೂ ವಿಶ್ವದಲ್ಲೇ ಅತ್ಯಂತ ಕನಿಷ್ಠ ಮಟ್ಟದಲ್ಲಿ ಅಂದರೆ ೩ ರೂಪಾಯಿ ಏರಿಕೆ ಮಾಡಿರುವುದನ್ನು ಸಮರ್ಥಿಸಿಕೊಂಡಿದ್ದಾರೆ. ಜಾಗತಿಕವಾಗಿ ತೈಲ ಬೆಲೆಯನ್ನು ಭಾರತವೇ ಆತ್ಯಂತ ಕಡಿಮೆ ಮಟ್ಟದಲ್ಲಿ ಏರಿಕೆ ಮಾಡಿದೆ. ಅಮೆರಿಕ ಶೇಕಡ ೪೪.೫, ಶ್ರೀಲಂಕಾ ಶೇಕಡ ೩೮.೨, ಯುಕೆ ಶೇಕಡ ೧೬.೨, ಜರ್ಮನಿ ಶೇಕಡ ೧೩.೭ ರಷ್ಟು ಹೆಚ್ಚಳ ಮಾಡಿದ್ದರೆ, ಭಾರತದಲ್ಲಿ ಕೇವಲ ಶೇಕಡ ೩.೨ರಷ್ಟು ಹೆಚ್ಚಳ ಮಾಡಿದೆಯಷ್ಟೇ ಎಂದು ಅಂಕಿ -ಅಂಶ ಸಹಿತ ಮಾಹಿತಿ ನೀಡಿದರು.

<><><><>

ತೈಲ ಸಾಗಾಣಿಕೆಯ ಹಾರ್ಮುಜ್ ಜಲಮಾರ್ಗವನ್ನು ಶೀಘ್ರವೇ ಸಂಚಾರಕ್ಕೆ ಮುಕ್ತಗೊಳಿಸಲಾಗುವುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಇರಾನ್‌ಗೆ ಯಾವುದೇ ಕಾರಣಕ್ಕೂ ಅಣ್ವಸ್ತ್ರ ಬಳಸಿಕೊಳ್ಳಲು ಅವಕಾಶ ನೀಡುವುದಿಲ್ಲ ಎಂದು ಅವರು ಖಾಸಗಿ ವಾಹಿನಿಯೊಂದಕ್ಕೆ ನೀಡಿರುವ ಸಂದರ್ಶನದಲ್ಲಿ ತಿಳಿಸಿದ್ದಾರೆ. ಪಶ್ಚಿಮ ಏಷ್ಯಾದಲ್ಲಿನ ಬಿಕ್ಕಟ್ಟು ನಿವಾರಣೆಗೆ ಅಮೆರಿಕ ಕೈಗೊಂಡಿರುವ ಕ್ರಮಗಳು ಸಕಾರಾತ್ಮಕವಾಗಿವೆ ಎಂದು ಡೊನಾಲ್ಡ್ ಟ್ರಂಪ್ ಸಮರ್ಥಿಸಿಕೊಂಡಿದ್ದಾರೆ.

<><><><>

ಪಶ್ಚಿಮ ಏಷ್ಯಾದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಮರುಸ್ಥಾಪಿಸುವಲ್ಲಿ ಭಾರತ ಪ್ರಮುಖ ಮತ್ತು ದೊಡ್ಡ ಪಾತ್ರ ವಹಿಸಬಲ್ಲದು ಎಂದು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಗ್ಚಿ ಹೇಳಿದ್ದಾರೆ. ದೆಹಲಿಯಲ್ಲಿ ನಡೆಯುತ್ತಿರುವ ಬ್ರಿಕ್ಸ್ ವಿದೇಶಾಂಗ ಸಚಿವರ ಸಭೆಯಲ್ಲಿ ಪಾಲ್ಗೊಳ್ಳಲು ಭಾರತಕ್ಕೆ ಆಗಮಿಸಿರುವ ಅವರು, ಯುದ್ಧದಿಂದ ಯಾವುದೇ ಸಮಸ್ಯೆಯನ್ನು ಬಗೆಹರಿಸಲು ಸಾಧ್ಯವಿಲ್ಲ ಎಂದು ಪ್ರತಿಪಾದಿಸಿದರು. ಇರಾನ್‌ಗೆ ಸಂಬಂಧಿಸಿದ ಯಾವುದೇ ವಿಷಯಕ್ಕೂ ಮಿಲಿಟರಿ ಅಥವಾ ಯುದ್ಧದ ಮೂಲಕ ಪರಿಹಾರ ಕಂಡುಕೊಳ್ಳಲು ಸಾಧ್ಯವಿಲ್ಲ. ಮಾತುಕತೆ ಮತ್ತು ರಾಜತಾಂತ್ರಿಕ ಒಪ್ಪಂದಗಳನ್ನು ಹೊರತುಪಡಿಸಿ ಈ ಬಿಕ್ಕಟ್ಟಿಗೆ ಬೇರೆ ಯಾವುದೇ ಪರ್ಯಾಯ ಪರಿಹಾರವಿಲ್ಲ ಎಂದು ಸ್ಪಷ್ಟಪಡಿಸಿದರು.

<><><><>

ಸಿಕ್ಕಿಂ ರಾಜ್ಯೋತ್ಸವ ದಿನದಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರು ಸಿಕ್ಕಿಂ ಜನರಿಗೆ ಶುಭ ಕೋರಿದ್ದಾರೆ. ಭಾರತದ ಅಭಿವೃದ್ಧಿಗೆ ಸಿಕ್ಕಿಂ ನೀಡಿದ ಕೊಡುಗೆಯನ್ನು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ನರೇಂದ್ರ ಮೋದಿ ಅವರು ಉಲ್ಲೇಖಿಸಿದ್ದಾರೆ.

<><><><>

ಗುರುಗ್ರಾಮದ ಶಿಕೋಹ್‌ಪುರ ಗ್ರಾಮದಲ್ಲಿ ೨೦೦೮ರ ಭೂ ವ್ಯವಹಾರಕ್ಕೆ ಸಂಬಂಧಿಸಿದ ಹಣ ವರ್ಗಾವಣೆ ಪ್ರಕರಣದಲ್ಲಿ ದೆಹಲಿ ನ್ಯಾಯಾಲಯ ಉದ್ಯಮಿ ರಾಬರ್ಟ್ ವಾದ್ರಾ ಅವರಿಗೆ ಜಾಮೀನು ನೀಡಿದೆ. ಈ ಪ್ರಕರಣವನ್ನು ಹೆಚ್ಚಿನ ವಿಚಾರಣೆಗಾಗಿ ಜುಲೈ ೧೦ಕ್ಕೆ ಮುಂದೂಡಲಾಗಿದೆ. ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ಸಲ್ಲಿಸಲಾದ ಜಾರಿ ನಿರ್ದೇಶನಾಲಯದ ದೂರನ್ನು ನ್ಯಾಯಾಲಯ ಪರಿಗಣಿಸಿ ವಾದ್ರಾ ಅವರಿಗೆ ಸಮನ್ಸ್ ನೀಡಲಾಗಿತ್ತು. ವಾದ್ರಾ ಅವರು ರೌಸ್ ಅವೆನ್ಯೂ ನ್ಯಾಯಾಲಯದ ಮುಂದೆ ಇಂದು ಹಾಜರಾದರು.

<><><><>

ಇಂದು ಅಂತಾರಾಷ್ಟ್ರೀಯ ಬೆಳಕಿನ ದಿನವನ್ನು ಆಚರಿಸಲಾಗುತ್ತಿದೆ. ಭೌತಶಾಸ್ತ್ರಜ್ಞ ಮತ್ತು ಎಂಜಿನಿಯರ್ ಥಿಯೋಡರ್ ಮೈಮನ್ ೧೯೬೦ರಲ್ಲಿ ಲೇಸರ್‌ನ ಮೊದಲ ಯಶಸ್ವಿ ಕಾರ್ಯಾಚರಣೆಯನ್ನು ಸ್ಮರಿಸುವ ಸಲುವಾಗಿ ಪ್ರತಿ ವರ್ಷ ಮೇ ೧೬ ರಂದು ಈ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷದ ಧ್ಯೇಯವಾಕ್ಯ "ಸುಸ್ಥಿರ ಭವಿಷ್ಯಕ್ಕಾಗಿ ಬೆಳಕು", ಇದು ಬೆಳಕು ಆಧಾರಿತ ತಂತ್ರಜ್ಞಾನಗಳು ಇಂಧನ-ಸಮರ್ಥ ಬೆಳಕು, ಹಸಿರು ಉತ್ಪಾದನೆ ಮತ್ತು ಸುಧಾರಿತ ಕೃಷಿ ಪದ್ಧತಿಗಳ ಮೂಲಕ ಸುಸ್ಥಿರತೆಗೆ ಹೇಗೆ ಕೊಡುಗೆ ನೀಡುತ್ತವೆ ಎಂಬುದರ ಮೇಲೆ ಕೇಂದ್ರೀಕರಿಸುತ್ತದೆ.

<><><><>

ಈಡನ್ ಗಾರ್ಡನ್ಸ್‌ನಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಹಾಗೂ ಗುಜರಾತ್ ಟೈಟನ್ಸ್ ವಿರುದ್ಧ ಸೆಣಸಲಿದೆ. ಪಂದ್ಯ ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ.

<><><><>

ಪಾಟಿಯಾಲಾದಲ್ಲಿ ನಡೆದ ಏಷ್ಯನ್ ಬಾಕ್ಸಿಂಗ್ ಚಾಂಪಿಯನ್‌ಶಿಪ್‌ನ ೧೫ ಹಾಗೂ ೧೭ ವಯೋಮಿತಿಯೊಳಗಿನ ವಿಭಾಗಗಳಲ್ಲಿ ಭಾರತದ ಬಾಕ್ಸರ್‌ಗಳು ಉತ್ತಮ ಪ್ರದರ್ಶನ ನೀಡಿದ್ದಾರೆ.

ಎರಡು ಸ್ವರ್ಣ ಪದಕ, ೭ ಬೆಳ್ಳಿ ಹಾಗೂ ೮ ಕಂಚಿನ ಪದಕಗಳನ್ನು ಗಳಿಸಿದ್ದಾರೆ. ಈ ಮೂಲಕ ಬಾಕ್ಸಿಂಗ್‌ನಲ್ಲಿ ಹೊಸ ಇತಿಹಾಸ ಬರೆಯುವ ನಿಟ್ಟಿನಲ್ಲಿ ಭಾರತದ ಬಾಕ್ಸರ್‌ಗಳು ದಾಪುಗಾಲಿಟ್ಟಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>